# ಮೈಸೂರು ಮಹಾನಗರ ಪಾಲಿಕೆ, ಮೈಸೂರು

ನಂ. ಸಿಇಎಸ್‌ಟಿ (5) : ಸಿಆರ್ : 03 : 2026-27

ಆಡಳಿತ ವಿಭಾಗ

ದಿನಾಂಕ : 08-09-2026

## ಅಧಿಸೂಚನೆ

ಕರ್ನಾಟಕ ಮಹಾನಗರ ಪಾಲಿಕೆಗಳು (ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಸಾಮಾನ್ಯ ನೇಮಕಾತಿ) ನಿಯಮಗಳು, 2011 ರ ರೀತ್ಯಾ ಮೈಸೂರು ಮಹಾನಗರ ಪಾಲಿಕೆಗೆ ಮಂಜೂರಾಗಿರುವ **"ಯುಜಿಡಿ ಹೆಲ್ಪರ್ಸ್"** ಗಳ ಪೈಕಿ ನೇರ ನೇಮಕಾತಿಯಡಿ ಖಾಲಿ ಇರುವ **"ಯುಜಿಡಿ ಹೆಲ್ಪರ್ಸ್"** ಹುದ್ದೆಗಳಿಗೆ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ರಾಜ್ಯದ ಪಾಲಿಕೆಗಳ ಯುಜಿಡಿ ಹೆಲ್ಪರ್ಸ್ ನೇಮಕಾತಿ)(ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹೊರತುಪಡಿಸಿ)(ವಿಶೇಷ) ನೇಮಕಾತಿ ನಿಯಮಗಳು 2026 ರ ರೀತ್ಯಾ **"ಯುಜಿಡಿ ಹೆಲ್ಪರ್ಸ್"** ಹುದ್ದೆಗಳನ್ನು ವಿಶೇಷ ನೇಮಕಾತಿ ಮೂಲಕ ಭರ್ತಿ ಮಾಡಲು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರ ಪರಿಷ್ಕೃತ ನಡವಳಿ ಆದೇಶ ಸಂಖ್ಯೆ : 1359725/ ಡಿಎಂಎ/ ಇಎಸ್‌ಟಿ/ 3 / ಇತರೆ / 53 /2024, ದಿನಾಂಕ : 24-08-2026 ರಲ್ಲಿ ಮೈಸೂರು ಮಹಾನಗರ ಪಾಲಿಕೆಗೆ 116 **ಯುಜಿಡಿ ಹೆಲ್ಪರ್ಸ್** ಹುದ್ದೆಗಳನ್ನು ಹಂಚಿಕೆ ಮಾಡಿ ಆದೇಶ ಹೊರಡಿಸಿರುತ್ತಾರೆ. ಅದರಂತೆ ಮೈಸೂರು ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ (ಎಸ್.ಟಿ.ಪಿ/ ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ಕರ್ತವ್ಯ ನಿರ್ವಹಿಸುತ್ತಿರುವ ಯುಜಿಡಿ ಹೆಲ್ಪರ್ಸ್‌ಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ವಿವರ | ದಿನಾಂಕ | ಅರ್ಜಿ ನಮೂನೆ ಪಡೆಯುವ ವಿಳಾಸ |
|---|---|---|
| ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಪ್ರಾರಂಭಿಕ ದಿನಾಂಕ | 10-09-2026 | ಮೈಸೂರು ಮಹಾನಗರ ಪಾಲಿಕೆ ಕೇಂದ್ರ ಕಚೇರಿ, ಸಯ್ಯಾಜಿರಾವ್ ರಸ್ತೆ, ಮೈಸೂರು-570004 |
| ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 09-10-2026 | |

| ನಗರ ಸ್ಥಳೀಯ ಸಂಸ್ಥೆಯ ಹೆಸರು | ಹುದ್ದೆಯ ಹೆಸರು ಹಾಗೂ ವೇತನ ಶ್ರೇಣಿ | ಭರ್ತಿ ಮಾಡಲು ಒಟ್ಟು ಖಾಲಿ ಇರುವ ಹುದ್ದೆಗಳ ಸಂಖ್ಯೆ | ನಿಗಧಿಪಡಿಸಲಾದ ಕನಿಷ್ಠ ವಿದ್ಯಾರ್ಹತೆ/ ಅರ್ಹತೆಗಳು |
|---|---|---|---|
| ಮೈಸೂರು ಮಹಾನಗರ ಪಾಲಿಕೆ | ಯುಜಿಡಿ ಹೆಲ್ಪರ್ಸ್ (ರೂ.27000-46675) | 116 | • ಕನ್ನಡ ಮಾತನಾಡಲು ಬಲ್ಲವರಾಗಿರಬೇಕು.<br>• ಮಹಾನಗರ ಪಾಲಿಕೆಯಲ್ಲಿ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ (ಎಸ್.ಟಿ.ಪಿ/ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ನೇಮಕಾತಿ ಹೊಂದಿ ಕನಿಷ್ಠ 02 ವರ್ಷ ಸೇವೆ ಸಲ್ಲಿಸಿರಬೇಕು.<br>• ಅರ್ಜಿ ಸಲ್ಲಿಸಲು ಸರ್ಕಾರ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ 18 ವರ್ಷ ಪೂರ್ಣಗೊಂಡಿದ್ದು, ಗರಿಷ್ಠ ವಯೋಮಿತಿ 55 ವರ್ಷ. |

..2

Scanned with OKEN Scanner

ಮೈಸೂರು ಮಹಾನಗರ ಪಾಲಿಕೆಯಲ್ಲಿ ನೇರ ನೇಮಕಾತಿಯಡಿ ಖಾಲಿ ಇರುವ **ಯುಜಿಡಿ ಹೆಲ್ಪರ್ಸ್** ಹುದ್ದೆಗಳನ್ನು ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಇಲಾಖೆಯು ಹೊರಡಿಸಿರುವ ಆದೇಶ ಸಂಖ್ಯೆ ಸಿಆಸುಇ : 02 : ಸೆಹಿಮ : 2023, ಬೆಂಗಳೂರು, ದಿನಾಂಕ : 08–03–2023 ರನ್ವಯ ಸಮತಳ ಮೀಸಲಾತಿಯನ್ನು ಹಾಗೂ ಸರ್ಕಾರದ ಆದೇಶ ಸಂಖ್ಯೆ : ಸಿಆಸುಇ : 02 : ಸೆಹಿಮ : 2026, ದಿನಾಂಕ : 13–05–2026 ರನ್ವಯ ಲಂಬ ಹಾಗೂ ಒಳ ಮೀಸಲಾತಿ ಅನುಸರಿಸಿ ರೋಸ್ಟರ್ ಬಿಂದುಗಳನ್ನು ವರ್ಗೀಕರಿಸಿರುವ ವಿವರ ಈ ಕೆಳಕಂಡಂತಿದೆ.

(1 ರಿಂದ 116)

| ಮೀಸಲಾತಿ | | ಇತರೆ | ಮಹಿಳೆ | ಗ್ರಾಮೀಣ | ಮಾ.ಸೈ. | ಯೋ.ನಿ. | ಕ.ಮಾ.ಅ. | ಅಂ.ವಿ. | ತೃ.ಲಿಂ. | ಒಟ್ಟು |
|---|---|---|---|---|---|---|---|---|---|---|
| ಪ.ಜಾ. | ಎ | 05 | 01 | 01 | - | - | - | - | - | 07 |
| | ಬಿ | 02 | – | 04 | - | - | - | - | - | 06 |
| | ಸಿ | – | 02 | 03 | - | - | - | - | - | 05 |
| ಪ.ಪಂ. | | 02 | – | 02 | - | - | - | – | – | 04 |
| ಪ್ರ.–1 | | 02 | 02 | – | – | 01 | – | – | – | 05 |
| ಪ್ರ–2(ಎ) | | 03 | 06 | 05 | – | 03 | – | – | – | 17 |
| ಪ್ರ–2(ಬಿ) | | 02 | 04 | – | – | – | – | – | – | 06 |
| ಪ್ರ–3(ಎ) | | 01 | 01 | 01 | – | 01 | – | – | – | 04 |
| ಪ್ರ–3(ಬಿ) | | 01 | – | 02 | – | – | – | – | 01 | 04 |
| ಸಾ.ಅ. | | – | 23 | 12 | 11 | – | 06 | 06 | – | 58 |
| **ಒಟ್ಟು** | | **18** | **39** | **30** | **11** | **05** | **06** | **06** | **01** | **116** |

ಅಧಿಸೂಚನೆಯ ಪ್ರತಿಯನ್ನು ಹಾಗೂ ನಿಗಧಿತ ಅರ್ಜಿ ನಮೂನೆಯನ್ನು ಮೈಸೂರು ಮಹಾನಗರ ಪಾಲಿಕೆಯ ಕೇಂದ್ರ ಕಛೇರಿಯಿಂದ ಪಡೆದು, ತಮಗೆ ಅನ್ವಯಿಸುವ ಎಲ್ಲಾ ಅಂಕಣಗಳನ್ನು ಭರ್ತಿ ಮಾಡುವುದು. ಅಭ್ಯರ್ಥಿಯು ತನ್ನ ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರವನ್ನು ಅರ್ಜಿಯ ಮೇಲೆ ಅಂಟಿಸಿ, ಅದರ ಮೇಲೆ ಸಹಿ ಅಥವಾ ಎಡಗೈ ಹೆಬ್ಬೆಟ್ಟಿನ ಗುರುತು ಮಾಡುವುದು ಹಾಗೂ ಅರ್ಜಿಯ ನಮೂನೆಯ ಕೊನೆಯಲ್ಲಿ ಘೋಷಣೆಯ ನಂತರ ಸಹಿ/ಹೆಬ್ಬೆಟ್ಟಿನ ಗುರುತು ಮಾಡುವುದು. ಹುದ್ದೆಗೆ ಸಂಬಂಧಿಸಿದ ವಿದ್ಯಾರ್ಹತೆ, ವಯಸ್ಸು ಮತ್ತು ಕೋರಿರುವ ಮೀಸಲಾತಿಗೆ ಸಂಬಂಧಿಸಿದಂತೆ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರಿಗಳಿಂದ ಪಡೆದು, ಅವುಗಳ ನಕಲು ಪ್ರತಿಗಳನ್ನು ಸಂಬಂಧಪಟ್ಟ ಶಾಖಾ ಮುಖ್ಯಸ್ಥರಿಂದ ದೃಢೀಕರಿಸಿ ಅರ್ಜಿಯೊಂದಿಗೆ ಲಗತ್ತಿಸಿ ಅರ್ಜಿಯನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು ಮೈಸೂರು ಮಹಾನಗರ ಪಾಲಿಕೆ ಮೈಸೂರು ಇವರಿಗೆ ದಿನಾಂಕ : 09–10–2026 ರ ಸಂಜೆ 5–30 ಗಂಟೆಯೊಳಗೆ ನೇರವಾಗಿ ಸಲ್ಲಿಸಿ ಸ್ವೀಕೃತಿ ಪಡೆಯತಕ್ಕದ್ದು. ಅಂಚೆ ಮೂಲಕ ಅಥವಾ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅವಧಿ / ಸಮಯ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸಬೇಕಾದ ದಾಖಲೆಗಳು :–**

| | |
|---|---|
| 1 | ಮೈಸೂರು ಮಹಾನಗರ ಪಾಲಿಕೆಯಿಂದ ಪಡೆದುಕೊಂಡು, ಭರ್ತಿ ಮಾಡಿರುವ ನಿಗಧಿತ ಅರ್ಜಿ. |
| 2 | ಇತ್ತೀಚಿನ ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ. (03 ಸಂಖ್ಯೆ) |
| 3 | ಜನ್ಮ ದಿನಾಂಕದ ದೃಢೀಕರಣಕ್ಕಾಗಿ ಶೈಕ್ಷಣಿಕ ದಾಖಲಾತಿಗಳು ಅಥವಾ ಆಧಾರ್‌ಕಾರ್ಡ್ ಅಥವಾ ಮತದಾರರ ಗುರುತಿನ ಚೀಟಿ ಅಥವಾ ಪಡಿತರ ಚೀಟಿ ಅಥವಾ ಪ್ರಾವಿಡೆಂಟ್ ಫಂಡ್ ಅಥವಾ ಇ.ಎಸ್.ಐ ದಾಖಲೆಗಳನ್ನು ಸಲ್ಲಿಸುವುದು. (ನೈಜತೆ ಹೊಂದಿರುವ ಯಾವುದಾದರು ಒಂದು ದಾಖಲೆ ಸಲ್ಲಿಸುವುದು) |
| 3 | ಮೈಸೂರು ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ(ಎಸ್.ಟಿ.ಪಿ/ ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ಕಾರ್ಯನಿರ್ವಹಿಸುತ್ತಿರುವ ಯುಜಿಡಿ ಹೆಲ್ಪರ್ಸ್ ಮಹಾನಗರ ಪಾಲಿಕೆಯ ಸಕ್ಷಮ ಪ್ರಾಧಿಕಾರದಿಂದ ದೃಢೀಕರಿಸಿರುವ ಸೇವಾ ದೃಢೀಕರಣ ಪತ್ರ ಸಲ್ಲಿಸುವುದು. |

..3

Scanned with OKEN Scanner

| | |
|---|---|
| 4 | ಮೈಸೂರು ಮಹಾನಗರ ಪಾಲಿಕೆಯಲ್ಲಿ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ(ಎಸ್.ಟಿ.ಪಿ/ ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ಯುಜಿಡಿ ಹೆಲ್ಪರ್ಸ್ ಸಂಬಂಧಿಸಿದಂತೆ ಮಹಾನಗರ ಪಾಲಿಕೆಯಿಂದ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್), ದಾಖಲೆಗಳನ್ನು ಸಂಬಂಧಪಟ್ಟ ಅಧಿಕಾರಿಗಳಿಂದ ಧೃಡೀಕರಿಸಿ ಕಡ್ಡಾಯವಾಗಿ ಸಲ್ಲಿಸುವುದು. |
| 5 | <u>ಜಾತಿ/ಮೀಸಲಾತಿ ಪ್ರಮಾಣ ಪತ್ರಗಳು:-</u><br>ಪರಿಶಿಷ್ಟ ಜಾತಿ (ಪ್ರವರ್ಗ-ಎ, ಪ್ರವರ್ಗ-ಬಿ, ಮತ್ತು ಪ್ರವರ್ಗ-ಸಿ) ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ಯಲ್ಲಿ, ಪ್ರವರ್ಗ-1 ರ ಅಭ್ಯರ್ಥಿಗಳು ನಮೂನೆ 'ಇ' ಯಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ಪಡೆದು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. |
| 6 | <u>ಗ್ರಾಮೀಣ ಅಭ್ಯರ್ಥಿಗಳು :-</u><br>ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ : 96 : ಸೇಅನಿ : 2005, ದಿನಾಂಕ : 10-08-2005 ರ ಪ್ರಕಾರ ನಿಗದಿತ ನಮೂನೆ-2 ರಲ್ಲಿ ಸಂಬಂಧಪಟ್ಟ ಪ್ರಾಧಿಕಾರಗಳಿಂದ ಪಡೆದು, ದೃಢೀಕೃತ ಪ್ರತಿಯನ್ನು ಸಲ್ಲಿಸತಕ್ಕದ್ದು. |
| 7 | <u>ಅಂಗವಿಕಲ ಅಭ್ಯರ್ಥಿಗಳು :-</u><br>ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ವೈದ್ಯಕೀಯ ಪ್ರಮಾಣ ಪತ್ರವನ್ನು ದಿನಾಂಕ : 19-11-2005 ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ : ಸಿಆಸುಇ : 115 : ಸೇಅನಿ : 2005 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು. |
| 8 | <u>ಯೋಜನಾ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು :-</u><br>ಸರ್ಕಾರದ ಯೋಜನೆಗಳಿಂದ ನಿರಾಶ್ರಿತರ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿರುವ ಹುದ್ದೆಗಳನ್ನು ಕ್ಲೇಮ್ ಮಾಡುವ ಅಭ್ಯರ್ಥಿಗಳು, ಸರ್ಕಾರಿ ಆದೇಶ ಸಂಖ್ಯೆ : ಸಿಆಸುಇ : 44 : ಸೇಅನಿ : 2001 ರ ದಿನಾಂಕ : 27-07-2001 ರಲ್ಲಿ ನಿಗಧಿಪಡಿಸಿದ ನಮೂನೆಯಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು. |
| 9 | <u>ಮಾಜಿ ಸೈನಿಕರು:-</u><br>ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ ವಿಮುಕ್ತಿಹೊಂದಿದ ಬಗ್ಗೆ ಪ್ರಮಾಣ ಪತ್ರವನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸತಕ್ಕದ್ದು. |
| 10 | <u>ಕನ್ನಡ ಮಾಧ್ಯಮ ಅಭ್ಯರ್ಥಿಗಳು:-</u><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ : 71 : ಎಸ್‌ಆರ್‌ಆರ್ : 2001, ದಿನಾಂಕ : 24-10-2002 ರಲ್ಲಿ ಹೊರಡಿಸಿರುವ ಕರ್ನಾಟಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ (9)(1)(ಸಿ) ರನ್ವಯ ಅಭ್ಯರ್ಥಿಯು 1 ರಿಂದ 10 ನೇ ತರಗತಿ ವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುತ್ತಾರೆ ಎನ್ನುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಸಹಿ ಹಾಗೂ ಮೊಹರು ಪ್ರಮಾಣ ಪತ್ರವನ್ನು ಪಡೆದು ಸಲ್ಲಿಸತಕ್ಕದ್ದು. |
| 11 | ತೃತೀಯ ಲಿಂಗ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರದಿಂದ ಪ್ರಮಾಣ ಪತ್ರ ಪಡೆದು ಸಲ್ಲಿಸತಕ್ಕದ್ದು. |
| 12 | ಅಭ್ಯರ್ಥಿಯು ದೈಹಿಕವಾಗಿ ಸಾಮರ್ಥ್ಯವಿರುವ ಮತ್ತು ಆರೋಗ್ಯವಂತರಾಗಿರುವ ಬಗ್ಗೆ ಜಿಲ್ಲಾ ವೈದ್ಯಾಧಿಕಾರಿಗಳಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರ. |

**<u>ನೇಮಕಾತಿ ವಿಧಾನ:-</u>**

| | |
|---|---|
| 1 | ಸರ್ಕಾರದ ಅಧಿಸೂಚನೆ ಸಂಖ್ಯೆ : ನ ಅ ಇ : 77 : ಎಂ ಎನ್ ಇ : 2018(ಇ) ದಿನಾಂಕ : 24-07-2026 ರಲ್ಲಿ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ (ರಾಜ್ಯದ ಮಹಾನಗರ ಪಾಲಿಕೆಗಳ ಯುಜಿಡಿ ಹೆಲ್ಪರ್ಸ್ ನೇಮಕಾತಿ)(ಗ್ರೇಟರ್ ಬೆಂಗಳೂರು ಪ್ರಾಧಿಕಾರ ಹೊರತುಪಡಿಸಿ)(ವಿಶೇಷ) ನೇಮಕಾತಿ ನಿಯಮಗಳು 2026ರ ರೀತ್ಯಾ ಅಭ್ಯರ್ಥಿಗಳ ಆಯ್ಕೆಯನ್ನು ಮಾಡಲಾಗುವುದು. |

..4

Scanned with OKEN Scanner

| | |
|---|---|
| 2 | ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಮೈಸೂರು ಮಹಾನಗರ ಪಾಲಿಕೆಯಲ್ಲಿ ಪ್ರಸ್ತುತ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ(ಎಸ್.ಟಿ.ಪಿ/ ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ಕಾರ್ಯನಿರ್ವಹಿಸುತ್ತಿರುವ ಒಳಚರಂಡಿ ಸಹಾಯಕರನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು. |
| 3 | ಮೈಸೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ (ಎಸ್.ಟಿ.ಪಿ/ ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ಯುಜಿಡಿ ಹೆಲ್ಪರ್ಸ್ ಸಂಬಂಧಿಸಿದಂತೆ ಮಹಾನಗರ ಪಾಲಿಕೆಯಿಂದ ಪಾವತಿಸಲಾದ ಕಾರ್ಮಿಕರ ರಾಜ್ಯ ವಿಮೆ (ಇ.ಎಸ್.ಐ) ಮತ್ತು ಭವಿಷ್ಯ ನಿಧಿ (ಪಿ.ಎಫ್), ದಾಖಲಾತಿಗಳನ್ನು ಕಡ್ಡಾಯವಾಗಿ ಪರಿಗಣಿಸಲಾಗುವುದು. |
| 4 | ನೇಮಕಾತಿ ಪ್ರಾಧಿಕಾರಿಯು ನಿಯಮ(4) ರ ಉಪ ನಿಯಮ (1) ರ ರೀತ್ಯಾ ಅಭ್ಯರ್ಥಿಗಳು ಸಲ್ಲಿಸಿದ ಅರ್ಜಿಗಳಲ್ಲಿ ಈ ನಿಯಮಾನುಸಾರ ನೇಮಕಾತಿಗೆ ಅರ್ಹರಾಗುವ ಅಭ್ಯರ್ಥಿಗಳ ಅರ್ಹತೆಗೆ ಅನುಗುಣವಾಗಿ (ಅಂದರೆ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ (ಎಸ್.ಟಿ.ಪಿ/ ವೆಟ್‌ವೆಲ್ ಕಾರ್ಯನಿರ್ವಹಿಸುತ್ತಿರುವರನ್ನು ಹೊರತುಪಡಿಸಿ) ಸಲ್ಲಿಸಿದ ಸೇವಾ ಅವಧಿಯನ್ನು ಪರಿಗಣಿಸಿ) ಚಾಲ್ತಿಯಲ್ಲಿರುವ ಮೀಸಲಾತಿಗೊಳಪಟ್ಟು ಅರ್ಹತಾ ಪಟ್ಟಿಯನ್ನು ಕಾನೂನು ಮತ್ತು ನಿಯಮಾನುಸಾರ ಪ್ರಕಟಿಸಲಾಗುವುದು. |
| 5 | ನೇಮಕಾತಿ ಪ್ರಾಧಿಕಾರಿಯು ನಿಯಮ(4) ಉಪ ನಿಯಮ (1) ರ ರೀತ್ಯಾ ಸಾಮಾನ್ಯ ವರ್ಗ ಮತ್ತು ಇತರೆ ಹಿಂದುಳಿದ ವರ್ಗಗಳ ಅಭ್ಯರ್ಥಿಗಳು ಲಭ್ಯವಾಗದೇ ಇದ್ದ ಪಕ್ಷದಲ್ಲಿ ಒಂದು ಬಾರಿ ಮಾತ್ರ ವಿನಾಯಿತಿ ನೀಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ಪರಿಗಣಿಸಿ ನೇಮಕಾತಿ ಮಾಡಲು ಕ್ರಮಕೈಗೊಳ್ಳಲಾಗುವುದು. |
| 6 | ನೇಮಕಾತಿ ಪ್ರಾಧಿಕಾರಿಯು ಆಯ್ಕೆ ನಿಯಮ-4 ಉಪ ನಿಯಮ(5) ರಂತೆ ಪ್ರತಿಯೊಂದು ಪ್ರವರ್ಗದ ಮೀಸಲಾತಿಗೆ ಅನುಗುಣವಾಗಿ ಆಯ್ಕೆಯಾಗಬಹುದಾದ ಅಭ್ಯರ್ಥಿಗಳ ಶೇ:20 ರಷ್ಟು ಹೆಚ್ಚುವರಿ ಪಟ್ಟಿಯನ್ನು ಸಹ ತಯಾರಿಸಲಾಗುವುದು. |
| 7 | ನಿಯಮ-2 ಉಪ ನಿಯಮ(2) ಮತ್ತು (5) ರಂತೆ ತಯಾರಿಸಲಾದ ಆಯ್ಕೆ ಪಟ್ಟಿಯನ್ನು ಮಹಾನಗರ ಪಾಲಿಕೆಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ತಿಳಿಸಲಾಗುವುದು. |
| 8 | ಮೈಸೂರು ಮಹಾನಗರ ಪಾಲಿಕೆಯಲ್ಲಿ ಹಾಲಿ ನೇರಪಾವತಿ/ಕ್ಷೇಮಾಭಿವೃದ್ಧಿ/ಸಮಾನ ಕೆಲಸಕ್ಕೆ ಸಮಾನ ವೇತನ/ ದಿನಗೂಲಿ /ಗುತ್ತಿಗೆ/ಹೊರಗುತ್ತಿಗೆಯಡಿಯಲ್ಲಿ ಯುಜಿಡಿ ಹೆಲ್ಪರ್ಸ್ ಹುದ್ದೆಯಲ್ಲಿ ಹೆಚ್ಚಿನ ಸೇವಾ ಅವಧಿ ಸಲ್ಲಿಸಿರುವವರಿಗೆ ಆದ್ಯತೆ ನೀಡಲಾಗುವುದು. |
| 9 | ಎರಡು ಮತ್ತು ಅದಕ್ಕಿಂತ ಹೆಚ್ಚಿನ ಅಭ್ಯರ್ಥಿಗಳ ಸೇವಾ ಅವಧಿ ಒಂದೇ ಇದ್ದ ಪಕ್ಷದಲ್ಲಿ, ಅಂತಹ ಅಭ್ಯರ್ಥಿಗಳ ಜೇಷ್ಟತೆಯನ್ನು ಅವರ ವಯಸ್ಸಿಗೆ ಅನುಗುಣವಾಗಿ ಅಂದರೆ ಹೆಚ್ಚು ವಯಸ್ಕರನ್ನು ಕಡಿಮೆ ವಯಸ್ಕರಿಗಿಂತ ಮೇಲೆ ಪರಿಗಣಿಸಲಾಗುವುದು ಹಾಗೂ ಹುಟ್ಟಿದ ದಿನಾಂಕ ಹಾಗೂ ಸೇವಾ ಅವಧಿ ಒಂದೇ ಆಗಿದ್ದಲ್ಲಿ ಲಾಟರಿ ಮುಖಾಂತರ ಆಯ್ಕೆ ಮಾಡಲಾಗುವುದು |
| 10 | ನಿಯಮ (4) ರ ಉಪ ನಿಯಮ(2) ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳು ನಿಗಧಿತ ಅವಧಿಯೊಳಗೆ ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದಿದ್ದಲ್ಲಿ ಸದರಿ ಅಭ್ಯರ್ಥಿಗೆ ಬದಲಾಗಿ ಅದೇ ಪ್ರವರ್ಗದ ಮೀಸಲಾತಿಯಲ್ಲಿ ಹೆಚ್ಚುವರಿ ಪಟ್ಟಿಯಲ್ಲಿ ಅಭ್ಯರ್ಥಿಯಾಗಿರುವ ಮತ್ತೊಬ್ಬ ಅಭ್ಯರ್ಥಿಯನ್ನು ಪರಿಗಣಿಸಲಾಗುವುದು |
| 11 | ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳ ಜಾತಿ ಪ್ರಮಾಣ ಪತ್ರದ ಬಗ್ಗೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಅಧ್ಯಕ್ಷರು, ಜಾತಿ ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು. |
| 12 | ನೇಮಕಾತಿ ಪ್ರಾಧಿಕಾರಿಯು ಆಯ್ಕೆ ಮಾಡಿದ ಅಭ್ಯರ್ಥಿಗಳ ಪಟ್ಟಿಯು ಗುರುತಿಸಲಾದ ಖಾಲಿ ಹುದ್ದೆಗಳು ಭರ್ತಿಯಾಗುವವರೆಗೆ ಅಥವಾ ಆಯ್ಕೆ ಪಟ್ಟಿಯು ಪ್ರಕಟವಾದ ಒಂದು ವರ್ಷದ ಅವಧಿಯವರೆಗೆ ಯಾವುದು ಮೊದಲೋ ಅಲ್ಲಿಯವರೆಗೆ ಚಾಲ್ತಿಯಲ್ಲಿರುತ್ತದೆ. |
| 13 | ಅಭ್ಯರ್ಥಿಗಳ ನೇಮಕಾತಿಯನ್ನು ನಿಯಮ (4) ರ ರೀತ್ಯಾ ಆಯ್ಕೆ ಪಟ್ಟಿಯಲ್ಲಿ ನಮೂದಿಸಲಾದ ಅಭ್ಯರ್ಥಿಗಳ ಹೆಸರು, ಅವರ ಹೆಸರಿನ ಮುಂದೆ ತೋರಿಸಲಾದ ಖಾಲಿ ಹುದ್ದೆಗಳಿಗನುಸಾರ ಎಲ್ಲಾ ರೀತಿಯಿಂದ ನೇಮಕಾತಿಗೆ ಅರ್ಹರಾಗಿದ್ದಾರೆ ಎಂಬುದನ್ನು ವಿಚಾರಣೆಯ ಮೂಲಕ ಖಚಿತಪಡಿಸಿಕೊಂಡು ನೇಮಕಾತಿ ಆದೇಶ ನೀಡಲಾಗುವುದು. |

..5

Scanned with OKEN Scanner

| | |
|---|---|
| 14 | ನಿಯಮ (4) ರ ಉಪ ನಿಯಮ (6) ರಲ್ಲಿ ಅಭ್ಯರ್ಥಿಗಳ ಹೆಸರನ್ನು ಪ್ರಕಟಿಸಿದ ಮಾತ್ರಕ್ಕೆ ಅವರ ನೇಮಕಾತಿ ಹಕ್ಕು ಎಂದು ಪರಿಭಾವಿಸತಕ್ಕದ್ದಲ್ಲ. |
| 15 | ನೇಮಕಾತಿಯ ಬಗ್ಗೆ ಅಂತಿಮ ತೀರ್ಮಾನವನ್ನು ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ, ಮೈಸೂರು ರವರು ಕಾಯ್ದಿರಿಸಿಕೊಂಡಿರುತ್ತಾರೆ. |

**ವಿಶೇಷ ಸೂಚನೆಗಳು :-**

| | |
|---|---|
| 1 | ಅರ್ಜಿ ನಮೂನೆಯನ್ನು ಮೈಸೂರು ಮಹಾನಗರ ಪಾಲಿಕೆಯ ಕೇಂದ್ರ ಕಚೇರಿಯಿಂದ ಪಡೆಯುವುದು. ಅರ್ಜಿಯನ್ನು ಮಾರಾಟ ಮಾಡಲಾಗುವುದಿಲ್ಲ. |
| 2 | ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲೇ ಭರ್ತಿ ಮಾಡಿ ಅಧ್ಯಕ್ಷರು, ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು, ಮೈಸೂರು ಮಹಾನಗರ ಪಾಲಿಕೆ ಮೈಸೂರು ರವರ ಹೆಸರಿನಲ್ಲಿ ಸಲ್ಲಿಸುವುದು. |
| 3 | ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ಪ್ರಮಾಣ ಪತ್ರಗಳನ್ನು ಮತ್ತು ದಾಖಲೆಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದು ಲಗತ್ತಿಸಿರಬೇಕು ಮತ್ತು ಕಡ್ಡಾಯವಾಗಿ ಸಂಬಂಧಪಟ್ಟ ಶಾಖಾ ಮುಖ್ಯಸ್ಥರಿಂದ ದೃಢೀಕರಿಸಿರಬೇಕು |
| 4 | ಅರ್ಜಿ ನಮೂನೆಯಲ್ಲಿ ಅಭ್ಯರ್ಥಿಯ ಖಾಯಂ ವಿಳಾಸವನ್ನು ಕಡ್ಡಾಯವಾಗಿ ನಮೂದಿಸಬೇಕು. ಒಂದು ವೇಳೆ ಅಭ್ಯರ್ಥಿಯು ವಿಳಾಸ ಬದಲಾವಣೆಯಾದಲ್ಲಿ ತಕ್ಷಣವೇ ಈ ಕಚೇರಿಗೆ ಮಾಹಿತಿ ತಿಳಿಸಬೇಕು. ತಪ್ಪಿದಲ್ಲಿ ಮುಂದಿನ ಪತ್ರ ವ್ಯವಹಾರಗಳಿಗೆ ಅಭ್ಯರ್ಥಿಗಳೇ ಜವಾಬ್ದಾರರು. |
| 5 | ಈ ಅಧಿಸೂಚನೆಯು ಚಾಲ್ತಿಯಲ್ಲಿರುವ ಮತ್ತು ಕಾಲ-ಕಾಲಕ್ಕೆ ಸರ್ಕಾರದಿಂದ ಹೊರಡಿಸಲ್ಪಡುವ ಆದೇಶಗಳಿಗೆ ಒಳಪಟ್ಟಿರುತ್ತದೆ |
| 6 | ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ದಿನಾಂಕವು ಸಾರ್ವಜನಿಕ ರಜೆ ಎಂದು ಘೋಷಿಸಿದ್ದಲ್ಲಿ ಮುಂದಿನ ಕಚೇರಿ ಕೆಲಸದ ದಿನ ಅರ್ಜಿ ಸಲ್ಲಿಸಲು ಕಡೆಯ ದಿನಾಂಕ ಎಂದು ತಿಳಿಯುವುದು. |
| 7 | ಈ ಮೇಲಿನ ಸೂಚನೆಗಳಿಗೆ ಅನುಸಾರವಾಗಿ ದಾಖಲೆಗಳನ್ನು ಒದಗಿಸಲು ತಪ್ಪಿದಲ್ಲಿ ಅಂತಹ ಅಭ್ಯರ್ಥಿಯ ಅರ್ಜಿಯನ್ನು ತಿರಸ್ಕರಿಸಲಾಗುವುದು |
| 8 | ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತಾವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವನೆಂದು. ಕಂಡು ಬಂದಲ್ಲಿ ಅವನು/ ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು. |
| 9 | ಹೆಚ್ಚಿನ ಮಾಹಿತಿಯನ್ನು ಪಾಲಿಕೆ ವೆಬ್‌ಸೈಟ್ http://www.mysurucity.mrc.gov.in ಅಥವಾ ಮೈಸೂರು ಮಹಾನಗರ ಪಾಲಿಕೆಯಿಂದ ಪಡೆಯಬಹುದಾಗಿದೆ. |

ಸ್ಥಳ : ಮೈಸೂರು

ದಿನಾಂಕ: 08-09-2026

ಸಹಿ/-
ಅಧ್ಯಕ್ಷರು
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು
ಮೈಸೂರು ಮಹಾನಗರ ಪಾಲಿಕೆ
ಮೈಸೂರು

ಇವರಿಗೆ:-

ಸಂಕಲನಕಾರರು, ಇ-ರಾಜ್ಯಪತ್ರ, ಬೆಂಗಳೂರು ಇವರಿಗೆ ಕಳುಹಿಸುತ್ತಾ, ಈ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಕೋರಿದೆ.

..6

Scanned with OKEN Scanner

ಪ್ರತಿಗಳನ್ನು :-

1. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ವಿಕಾಸ ಸೌಧ ಬೆಂಗಳೂರು, ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ ಹಾಗೂ ಆಡಳಿತಾಧಿಕಾರಿಗಳು, ಮೈಸೂರು ಮಹಾನಗರ ಪಾಲಿಕೆ ಮೈಸೂರು ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಜಿಲ್ಲಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು ರವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಮೈಸೂರು ಜಿಲ್ಲೆ, ಮೈಸೂರು ರವರಿಗೆ ಕಳುಹಿಸುತ್ತಾ ತಮ್ಮ ಕಾರ್ಯಾಲಯದ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
6. ಜಿಲ್ಲಾ ಅಧಿಕಾರಿಗಳು, ಸಮಾಜ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
7. ಜಿಲ್ಲಾ ಅಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
8. ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
9. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಪಾಲಿಕೆಯ ಎಲ್ಲಾ ಶಾಖಾಧಿಕಾರಿಗಳಿಗೆ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
11. ಕಾರ್ಯಪಾಲಕ ಅಭಿಯಂತರರು(ಒಳಚರಂಡಿ)(ಪೂರ್ವ/ಪಶ್ಚಿಮ), ಮೈಸೂರು ಮಹಾನಗರ ಪಾಲಿಕೆ, ಮೈಸೂರು ರವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
12. ಪಾಲಿಕೆಯ ಎಲ್ಲಾ ವಲಯ ಆಯುಕ್ತರುಗಳಿಗೆ ಕಳುಹಿಸುತ್ತಾ ಸದರಿ ಅಧಿಸೂಚನೆಯನ್ನು ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಚುರಪಡಿಸಲು ಸೂಚಿಸಿದೆ.
13. ಸೀನಿಯರ್ ಪ್ರೋಗ್ರಾಮರ್ ಗಣಕಶಾಖೆ, ಮೈಸೂರು ಮಹಾನಗರ ಪಾಲಿಕೆ, ಮೈಸೂರು ರವರಿಗೆ ಕಳುಹಿಸುತ್ತಾ ಸದರಿ ಅಧಿಸೂಚನೆಯನ್ನು ಪಾಲಿಕೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು ಸೂಚಿಸಿದೆ.
14. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ
15. ಕಛೇರಿ ಪ್ರತಿ

8/9/2024

ಅಧ್ಯಕ್ಷರು
ಆಯ್ಕೆ ಮತ್ತು ನೇರ ನೇಮಕಾತಿ ಪ್ರಾಧಿಕಾರ ಹಾಗೂ ಆಯುಕ್ತರು
ಮೈಸೂರು ಮಹಾನಗರ ಪಾಲಿಕೆ
ಮೈಸೂರು

Scanned with OKEN Scanner